ಹಾಸನ ನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ.,
ದೇವರಾಜ ಅರಸ್ ಮಾರ್ಕೆಟ್, ಹಾಸನ. ☎ 264825

ವಾರ್ಷಿಕ ಬಡ್ಡಿ ದರದ ವಿವರಗಳು	ಸಾಮಾನ್ಯರಿಗೆ %	ಹಿರಿಯ ನಾಗರಿಕರಿಗೆ %
* 1 ವರ್ಷದಿಂದ 3 ವರ್ಷಗಳವರೆಗೆ	10.5	11
* 181 ದಿನಗಳಿಂದ 365 ದಿನಗಳವರೆಗೆ	8	8.5
* 91 ದಿನಗಳಿಂದ 180 ದಿನಗಳವರೆಗೆ	7	7.5
* 31 ದಿನಗಳಿಂದ 90 ದಿನಗಳವರೆಗೆ	6	6.5
* 90 ತಿಂಗಳುಗಳಲ್ಲಿ ಠೇವಣಿ ಮೊತ್ತ ದ್ವಿಗುಣ		

-ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ

ಜನತಾ ಮಾಧ್ಯಮ

ಸಂಪಾದಕ : ಆರ್.ಪಿ.ವೆಂಕಟೇಶಮೂರ್ತಿ
ವ್ಯವಸ್ಥಾಪಕ ಸಂಪಾದಕ :ಎಸ್.ಎನ್.ಮಂಜುನಾಥದತ್ತ

PREMIER MARKETING
#817/A,Opp: Mallige Residency,Govt.High School Field,Road,Hassan.
Ph:9620621333
9448742971
9844090035
08172-233509
Dr.Aquaguard
RO+UV+TDS Controller Water Purifier & Water Softner

ಡಿಸೆಂಬರ್ 1ರಿಂದ ಬಡವರಿಗೆ ಅನಿಲ ಭಾಗ್ಯ

ಅನಿಲ ಭಾಗ್ಯ ಯೋಜನೆಯನ್ನು ಡಿಸೆಂಬರ್ ಒಂದರಿಂದಲೇ ಜಾರಿಗೊಳಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಸೋಮವಾರ ವಿಧಾನಸೌಧದಲ್ಲಿ ಈ ವಿಷಯ ತಿಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರತಿ ಫಲಾನುಭವಿಗಳಿಗೆ 4,440 ರೂ. ಖರ್ಚು ಮಾಡಿದರೆ ಸಿಲಿಂಡರ್ ಜೊತೆಗೆ ಸ್ಟೌವ್, ಗ್ಯಾಸ್, ರೆಗ್ಯುಲೇಟರ್ ಅನ್ನು ಉಚಿತವಾಗಿ ನೀಡಲಾಗುತ್ತಿದೆ. ಜೊತೆಗೆ 2 ತಿಂಗಳು ಉಚಿತವಾಗಿ ಗ್ಯಾಸ್ ಮರು ಪೂರ್ಣ(ರೀ ಫಿಲ್ಲಿಂಗ್) ಗೊಳಿಸಲಾಗುವುದು ಎಂದು ಹೇಳಿದರು.

ರಿಚರ್ಡ್ ಥಲೇರ್‌ಗೆ 2017ನೇ ಸಾಲಿನ ಅರ್ಥಶಾಸ್ತ್ರ ನೊಬೆಲ್ ಪ್ರಶಸ್ತಿ

2017ನೇ ಸಾಲಿನ ಅರ್ಥಶಾಸ್ತ್ರವಿಭಾಗದ ನೊಬೆಲ್ ಪ್ರಶಸ್ತಿಗೆ ಯೂನಿವರ್ಸಿಟಿ ಆಫ್ ಚಿಕಾಗೋದ ರಿಚರ್ಡ್ ಥಲೇರ್ ಅವರನ್ನು ಆಯ್ಕೆ ಮಾಡಲಾಗಿದೆ. ಬಿಹೇವಿಯರಲ್ ಎಕನಾಮಿಕ್ಸ್‌ಗೆ ನೀಡಿರುವ ಕೊಡುಗೆಯನ್ನು ಗುರುತಿಸಿ ನೊಬೆಲ್ ಪ್ರಶಸ್ತಿಗೆ ರಿಚರ್ಡ್ ಥಲೇರ್ ಅವರನ್ನು ಆಯ್ಕೆ ಮಾಡಲಾಗಿದೆ.

'ಅಮೆರಿಕಾದ ಮೇಲಿನ ಅವಲಂಬನೆಯ ದಿನಗಳು ಮುಗಿದವು'

ಪಾಕಿಸ್ತಾನ ಮಿಲಿಟರಿ ಅಗತ್ಯತೆಗಳಿಗೆ ಅಮೆರಿಕ ಮೇಲೆ ಅವಲಂಬಿತವಾಗಿರುವ ದಿನಗಳು ಮುಗಿದಿವೆ ಎಂದು ಪಾಕಿಸ್ತಾನ ಪ್ರಧಾನಿ ಶಾಹಿದ್ ಖಕನ್ ಅಬ್ಬಾಸಿ ಹೇಳಿದ್ದಾರೆ. ಭಯೋತ್ಪಾದನೆ ವಿರುದ್ಧ ಇಡೀ ವಿಶ್ವ ನಡೆಸುತ್ತಿರುವ ಸಮರದಲ್ಲಿ ಪಾಕಿಸ್ತಾನದ ಪ್ರಯತ್ನವೂ ಇದೆ ಎಂಬುದನ್ನು ವಿಶ್ವ ಸಮುದಾಯ ಗುರುತಿಸಬೇಕು ಎಂದು ಅರಬ್ ನ್ಯೂಸ್‌ಗೆ ನೀಡಿರುವ ಸಂದರ್ಶನದಲ್ಲಿ ಅವರು ಹೇಳಿದ್ದಾರೆ.

ಜನತಾಮಾಧ್ಯಮ ಬೆಳಗಿನ ದೈನಿಕ JANATHAMADHYAMA KARKAN. RNI 41566. ಸಂಪುಟ : 40 ಸಂಚಿಕೆ :332 ಮಂಗಳವಾರ ಅ.10, 2017 ದೂರವಾಣಿ : 268494 ಪುಟ-4 ರೂ.2-00 NO. HSN-761/ 2015-17

ರೈತರು ಆರ್ಥಿಕ ಸದೃಢರಾಗಲು ಉಪ ಕಸುಬು ಅಗತ್ಯ

■ ಕೋರಮಂಗಲದಲ್ಲಿ ಪಶು ಸಂಗೋಪನಾ ಪಾಲಿಟೆಕ್ನಿಕ್ ಕೃಷಿ ಕಾಲೇಜು ಉದ್ಘಾಟನೆ

ಹಾಸನ : ವ್ಯವಸಾಯದ ಜೊತೆಗೆ ಉಪ ಕಸುಬುಗಳು ಇದ್ದಾಗ ಮಾತ್ರ ರೈತರು ಆರ್ಥಿಕವಾಗಿ ಸದೃಢರಾಗಬಹುದು ಎಂದು ರಾಜ್ಯ ಸಾರಿಗೆ ಸಚಿವ ಹೆಚ್.ಎಂ.ರೇವಣ್ಣ ಅಭಿಪ್ರಾಯಪಟ್ಟಿದ್ದಾರೆ.

ಸೋಮವಾರ ತಾಲ್ಲೂಕಿನ ಕೋರಮಂಗಲದಲ್ಲಿ ಪಶು ಸಂಗೋಪನಾ ಪಾಲಿಟೆಕ್ನಿಕ್ ಕೃಷಿ ಕಾಲೇಜು ಉದ್ಘಾಟಿಸಿ ಮಾತನಾಡಿದ ಅವರು, ಪಶು ಸಂಗೋಪನಾ ಪಾಲಿಟೆಕ್ನಿಕ್‌ಗಳ ಪ್ರಾರಂಭದಿಂದ ಉದ್ಯೋಗಾವಕಾಶ ಹಾಗೂ ಪಶು ಉತ್ಪನ್ನಗಳ ಮಾರುಕಟ್ಟೆ ವಿಸ್ತರಣೆಗೆ ಅವಕಾಶಗಳು ಹೆಚ್ಚುವಂತೆ ಮಾಡಿದೆ. ಈವರೆಗೆ ಕೇವಲ ಎರಡು ಪಾಲಿಟೆಕ್ನಿಕ್‌ಗಳು ರಾಜ್ಯದಲ್ಲಿದ್ದವು. ಅದರ ಸಂಖ್ಯೆಯನ್ನು ಐದಕ್ಕೆ ಏರಿಕೆ ಮಾಡಿರುವುದು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ರೇಷ್ಮೆ ಮತ್ತು ಪಶು ಸಂಗೋಪನಾ ಸಚಿವ ಎ.ಮಂಜು ಅವರ ಕಾರ್ಯಕ್ಷಮತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ

> “ರೈತರ ಆರ್ಥಿಕ ಲಾಭಕ್ಕೆ ಕುರಿ ಮೇಕೆಗಳ ಕೃತಕ ವೀರ್ಯ ಬ್ಯಾಂಕ್, ತಳಿ ಸಂವರ್ಧನಾ ಕೇಂದ್ರಗಳನ್ನು ತೆರೆಯಲಾಗುತ್ತದೆ. ಸರಿಯಾಗಿ ಸಂಸ್ಕರಿಸಲಾದ ಮಾಂಸ ಮಾರಾಟ ಮಳಿಗೆಗಳನ್ನು ತೆರೆಯಲಾಗುತ್ತಿದೆ. ಎ.ಪಿ.ಎಂ.ಸಿ.ಗಳಲ್ಲಿ ಕುರಿಗಳ ತೂಕ ಯಂತ್ರಗಳನ್ನು ಅಳವಡಿಸಲಾಗಿದೆ. ಪಶು ಸಂಗೋಪನಾ ಪಾಲಿಟೆಕ್ನಿಕ್‌ಗಳ ಪ್ರಾರಂಭದಿಂದ ಉದ್ಯೋಗಾವಕಾಶ ಹಾಗೂ ಮಾರುಕಟ್ಟೆ ವಿಸ್ತರಣೆ ಹೆಚ್ಚಿದೆ.
> *-ಹೆಚ್.ಎಂ.ರೇವಣ್ಣ, ಸಾರಿಗೆ ಸಚಿವ*



ಅವರು ಕೆ.ಎಂ.ಎಫ್.ನಂತೆ ಕುರಿ ಮತ್ತು ಮೇಕೆ ಸಾಕಾಣಿಕೆದಾರರ ಒಕ್ಕೂಟ ಪ್ರಾರಂಭಕ್ಕೆ ಚಾಲನೆ ನೀಡಿರುವುದು ಅಭಿನಂದನಾರ್ಹ. ಇದರಿಂದ ಗ್ರಾಮೀಣ ಭಾಗದ ರೈತಾಪಿ ವರ್ಗದವರ ಆರ್ಥಿಕಾಭಿವೃದ್ಧಿಗೆ ಹೆಚ್ಚಿನ ನೆರವು ದೊರೆಯಲಿದೆ.

ಮಾರುಕಟ್ಟೆ ಅಭಿವೃದ್ಧಿ ವಿಸ್ತರಣೆಗೆ ಸಾಧ್ಯವಾಗುತ್ತದೆ ಎಂದರು.

ಮೂಕ ಪ್ರಾಣಿಗಳ ಬಗ್ಗೆ ಮಾನವೀಯ ಮೌಲ್ಯವನ್ನು ಇಟ್ಟುಕೊಂಡು ಕೆಲಸ ನಿರ್ವಹಿಸಬೇಕು ಎಂದು ಸಚಿವರು ವಿದ್ಯಾರ್ಥಿಗಳಿಗೆ ಸೂಚಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಹಾಸನ, ಚಾಮರಾಜನಗರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪಶು ಸಂಗೋಪನಾ ಪಾಲಿಟೆಕ್ನಿಕ್ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ. ರೈತರಿಗೆ ಅನುಕೂಲವಾಗುವಂತೆ ಉತ್ತಮ ವೈದ್ಯರು ಮತ್ತ ಸಹಾಯಕ ವೈದ್ಯರನ್ನು ಸೃಷ್ಟಿ ಮಾಡುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ರೈತರಿಗೆ

> “ಮಾಂಸದ ಉತ್ಪಾದನೆಯಲ್ಲಿ ಹಾಸನ ಜಿಲ್ಲೆ 7ನೇ ಸ್ಥಾನದಲ್ಲಿದ್ದು, ಮಾಂಸ ಮಾರಾಟ ದರ ದುಬಾರಿಯಾಗಿದೆ. ಕುರಿ ಸಾಕಾಣಿಕೆ ಮಾಡಿರುವ ರೈತ ಮತ್ತು ಕೊಳ್ಳುವ ಜನರ ನಡುವೆ ದಲ್ಲಾಳಿಗಳ ಹಾವಳಿಯಿಂದ ಕುರಿ ಸಾಕಾಣಿಕೆದಾರರಿಗೆ ಹೆಚ್ಚಿನ ಲಾಭ ದೊರೆಯುತ್ತಿಲ್ಲ. ಇದನ್ನು ತಪ್ಪಿಸಲು ಎ.ಪಿ.ಎಂ.ಸಿ ಮೂಲಕ ಲೈವ್ ಸ್ಟಾಕ್ ಮಾಂಸವನ್ನು ವೈಜ್ಞಾನಿಕವಾಗಿ ತೂಕ ಮಾಡಿ ರೈತರಿಗೆ ಸಿಗುವಂತೆ ಸರ್ಕಾರ ಯೋಜನೆ ರೂಪಿಸಿದೆ.
> -ಎ.ಮಂಜು, ಪಶು ಸಂಗೋಪನಾ ಸಚಿವ

ರೇಷ್ಮೆ ಮತ್ತು ಪಶು ಸಂಗೋಪನೆ ಕೃಷಿಗಿಂತಲೂ ಹೆಚ್ಚಿನ ಲಾಭದಾಯಕವಾಗಿದೆ ಹಾಗೂ ಸುಸ್ಥಿರ ಆರ್ಥಿಕ ಪ್ರಗತಿಗೆ ಕಾರಣವಾಗುತ್ತಿದೆ ಎಂದರು.

(-4ನೇ ಪುಟಕ್ಕೆ)

ಕುಡಿಯುವ ನೀರು : ಹಣ ಬಿಡುಗಡೆಗೆ ಶಾಸಕ ಹೆಚ್.ಡಿ.ರೇವಣ್ಣ ಒತ್ತಾಯ



ಹಾಸನ : ಜಿಲ್ಲೆಯ ಎಲ್ಲಾ ಪ್ರದೇಶಗಳಲ್ಲಿಯೂ ಮಳೆ ಆಗಿಲ್ಲ. ಈಗಲೂ ಕೂಡ ಕುಡಿಯುವ ನೀರಿಗೆ ಹಲವೆಡೆ ತೊಂದರೆ ಇದೆ. ಹಾಗಾಗಿ ಕುಡಿಯುವ ನೀರು ಪೂರೈಕೆಗೆ ಹಣ ಬಿಡುಗಡೆ ಮಾಡಬೇಕು ಎಂದು ಶಾಸಕ ಹೆಚ್.ಡಿ.ರೇವಣ್ಣ ಒತ್ತಾಯಿಸಿದರು.

ಮಳೆಗೆ ಸಂಬಂಧಿಸಿದಂತೆ ತಕ್ಷಣವೇ ಎಲ್ಲೆಡೆ ಸರ್ವೆ ನಡೆಸಲಿ. ಮಳೆಯ ಪ್ರಮಾಣ ಕೆಲವು ಭಾಗಗಳಲ್ಲಿ ಜಾಸ್ತಿ ಆಗಿರಬಹುದು. ಎಲ್ಲಾ ಭಾಗದಲ್ಲಿಯೂ ಆಗಿಲ್ಲ ಎಂದು ಸೋಮವಾರ ಕರೆದಿದ್ದ ಸುದ್ದಿಗೋಷ್ಟಿಯಲ್ಲಿ ತಿಳಿಸಿದರು.

ಇಂದು 1200 ಅಡಿ ಭೂಮಿ ಕೊರೆದರೂ ನೀರು ಬರುತ್ತಿಲ್ಲ. ಕುಡಿಯುವ ನೀರಿಗಾಗಿ 36 ಕೋಟಿ ರೂ. ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ 4 ತಿಂಗಳಲ್ಲಿ ಕೇವಲ 10 ಕೋಟಿ ರೂ ಮಾತ್ರ ಬಿಡುಗಡೆ ಮಾಡಲಾಗಿದೆ. ಇನ್ನು 26 ಕೋಟಿ ರೂ ಬರಬೇಕಾಗಿದೆ. ಇಂದಿನ ಪರಿಸ್ಥಿತಿ ನೋಡಿದರೆ 26 ಕೋಟಿ ರೂ. ಜೊತೆಗೆ ಇನ್ನೂ 15 ಕೋಟಿ ರೂ. ಸೇರಿಸಿ ಕೊಡಬೇಕು ಎಂದು ಆಗ್ರಹಿಸಿದರು. *(-ಪುಟ 4ಕ್ಕೆ)*

ಜಮೀರ್ ವಿರುದ್ಧ ತೀವ್ರ ವಾಗ್ದಾಳಿ

ಜಮೀರ್ ಅಹಮ್ಮದ್‌ಗೆ ನೈತಿಕತೆ ಇದ್ದರೆ ತಕ್ಷಣವೇ ಜೆಡಿಎಸ್ ಪಕ್ಷಕ್ಕೆ ರಾಜಿನಾಮೆ ನೀಡಲಿ. ಅವರು ಏನೆಂಬುದು ಎಲ್ಲರಿಗೂ ಗೊತ್ತು. ಎಲ್ಲರಿಗೂ ಅವರು ಟೋಪಿ ಹಾಕಿದ್ದಾರೆ. ಅವರು ಕುಣಿಗಲ್‌ನಲ್ಲಿ ಹುಟ್ಟಿದವರು. ಹಾಗಾಗಿ ಕುಣಿಗಲ್ ಕ್ಷೇತ್ರದಿಂದಲೇ ಚುನಾವಣೆ ಎದುರಿಸಲಿ. ನಾನು ನನ್ನ ಹುಟ್ಟೂರು ಹೊಳೆನರಸೀಪುರ ಕ್ಷೇತ್ರದಿಂದ ಚುನಾವಣೆ ಎದುರಿಸುತ್ತೇನೆ. ಇದು ಅವರಿಂದ ಸಾಧ್ಯವೇ ಎಂದು ಹೆಚ್.ಡಿ.ರೇವಣ್ಣ, ಜಮೀರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಮೂಲಭೂತ ಸೌಕರ್ಯ ಅಭಿವೃದ್ಧಿಪಡಿಸಲು ಸೂಚನೆ

> “ಜಿಲ್ಲೆಯ ಕೈಗಾರಿಕಾ ಅಭಿವೃದ್ಧಿ ಕೇಂದ್ರದ ಒಟ್ಟು 2446.53 ಎಕರೆ ಭೂಮಿಯನ್ನು ಅಭಿವೃದ್ಧಿಪಡಿಸಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಟೆಕ್ಸ್‌ಟೈಲ್ ಆಧಾರಿತ ಕೈಗಾರಿಕೆಗಳಿವೆ. ಅಂದಾಜು 10000ಕ್ಕೂ ಹೆಚ್ಚು ಮಹಿಳಾ ಕಾರ್ಮಿಕರು ಇದರಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ.
> *-ರೋಹಿಣಿ ಸಿಂಧೂರಿ, ಜಿಲ್ಲಾಧಿಕಾರಿ*

ಹಾಸನ : ಚನ್ನರಾಯಪಟ್ಟಣ ಮತ್ತು ಜಿಲ್ಲೆಯ ವಿವಿಧ ಭಾಗಗಳ ಕೈಗಾರಿಕಾ ವಸಾಹತುವಿನಲ್ಲಿ ಮೂಲಭೂತ ಸೌಕರ್ಯಗಳಾದ ಬೀದಿ ದೀಪ, ರಸ್ತೆ, ಕಾಂಪೌಂಡ್, ಇತ್ಯಾದಿ ಸೌಲಭ್ಯವನ್ನು ಸರಿಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ರೋಹಿಣಿ ಸಿಂಧೂರಿ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಜಿಲ್ಲಾ ಕೈಗಾರಿಕಾ ಕೇಂದ್ರದ ಕೈಗಾರಿಕಾ ಸ್ಪಂದನ ಕಾರ್ಯಕ್ರಮ-2017 ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೈಗಾರಿಕಾ ವಸಾಹತುವಿನಲ್ಲಿ ಪದೇ ಪದೇ ವಿದ್ಯುತ್ ನಿಲುಗಡೆ ಮಾಡುತ್ತಿದ್ದು, ಅಧಿಕಾರಿಗಳ ಮಾಹಿತಿ ಮೇರೆಗೆ ಸಮರ್ಪಕವಾಗಿ ವಿದ್ಯುತ್ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೈಗಾರಿಕೆ ಮತ್ತು ಕಾರ್ಮಿಕರ ರಕ್ಷಣೆ ದೃಷ್ಟಿಯಿಂದ ಉಪ ಆರಕ್ಷಕ ಠಾಣೆಯನ್ನು ಕೈಗಾರಿಕಾ ಬೆಳವಣಿಗೆ ಕೇಂದ್ರದಲ್ಲಿ ಸ್ಥಾಪಿಸುವುದರ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಮಟ್ಟದ ಉನ್ನತಾಧಿಕಾರದ ಏಕಗವಾಕ್ಷಿ ಸಮಿತಿಯ ಸಭೆಯ ವಿಷಯಸೂಚಿ ಮತ್ತು ಟಿಪ್ಪಣಿಯ ಬಗ್ಗೆ ಚರ್ಚೆ ನಡೆಯಿತು.

ಅತಿ ಸಣ್ಣ ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳನ್ನು ಸ್ಥಾಪಿಸಲು 85 ಯೋಜನೆಗಳಿಗೆ ಸಂಬಂಧಪಟ್ಟಂತೆ ನಿವೇಶನ ಹಂಚಿಕೆ ಮಾಡಲಾಗಿದೆ. ಕೇವಲ 56 ಉದ್ದಿಮೆದಾರರು ಮಾತ್ರ ನಿವೇಶನದ ಮೊಬಲಗನ್ನು ಪಾವತಿಸಿದ್ದಾರೆ. ಉಳಿದಿರುವ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿ ಎಂದು ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಬೃಹತ್ ಪ್ರಮಾಣದ ಕೈಗಾರಿಕೆಗಳಲ್ಲಿ ಸ್ಥಳೀಯ ಕನ್ನಡಿಗರಿಗೆ ಉದ್ಯೋಗವನ್ನು ನೀಡುವ ಡಾ.ಸರೋಜಿನಿ ಮಹಿಷಿ ವರದಿಯ ಬಗ್ಗೆ ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಂ.ಜಾನಕಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ವಿ.ಎಸ್. ಹೆಗಡೆ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಅಧಿಕ ನಿರ್ದೇಶಕ ಎಚ್.ಪ್ರಕಾಶ್ ಹಾಗೂ ಸಂಘ ಸಂಸ್ಥೆಗಳ ಅಧಿಕಾರಿಗಳು, ಉದ್ಯಮಿದಾರರು, ಅಧಿಕಾರಿಗಳು ಹಾಜರಿದ್ದರು.

ಬೇಲೂರು ಪುರಸಭೆ ಅಧ್ಯಕ್ಷರಾಗಿ ಭಾರತಿ ಅವಿರೋಧ ಆಯ್ಕೆ

ಬೇಲೂರು : ಇಲ್ಲಿನ ಪುರಸಭೆ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ನಡೆದ ಚುನಾವಣೆ ಯಲ್ಲಿ ಜೆಡಿಎಸ್ ಪಕ್ಷದ 1ನೇ ವಾರ್ಡಿನ ಸದಸ್ಯೆ ಭಾರತಿ ಅರುಣ್ ಕುಮಾರ್ ಆಯ್ಕೆಯಾಗಿದ್ದಾರೆ.

ಭಾರತಿ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಚುನಾವಣಾಧಿಕಾರಿಯಾಗಿದ್ದ ತಹಸೀಲ್ದಾರ್ ಪರಮೇಶ್ ಅವರು, ಭಾರತಿ ಅರುಣ್ ಕುಮಾರ್ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಘೋಷಿಸಿದರು.

ನೂತನ ಅಧ್ಯಕ್ಷರಾಗಿ ಆಯ್ಕೆಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಭಾರತಿ ಅರುಣ್‌ಕುಮಾರ್, ಪಟ್ಟಣದಲ್ಲಿನ ಕುಂದು ಕೊರತೆಗಳನ್ನು ತಿಳಿದು ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು. ಎಲ್ಲಾ ಸದಸ್ಯರ ಸಹಕಾರ ಪಡೆದು ಪ್ರಮುಖವಾಗಿ ಪಟ್ಟಣದ ಜನತೆಗೆ ಕುಡಿಯುವ ನೀರು ಹಾಗೂ ಮೂಲಭೂತ ಸೌಲಭ್ಯ ಕಲ್ಪಿಸಲು ಮೊದಲ ಆದ್ಯತೆ ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಕೆ.ಎಸ್.ಲಿಂಗೇಶ್, ತಾಲ್ಲೂಕು ಅಧ್ಯಕ್ಷ ತೊ.ಚ.ಅನಂತ ಸುಬ್ಬರಾಯ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಎಂ.ಎ.ನಾಗರಾಜ್, ಎಪಿಎಂಸಿ ಅಧ್ಯಕ್ಷ ವಿಷ್ಣುಕುಮಾರ್, ಜಿ.ಪಂ. ಮಾಜಿ ಅಧ್ಯಕ್ಷ ಚಂದ್ರೇಗೌಡ, ಪುರಸಭೆ ಸದಸ್ಯ ಶ್ರೀನಿಧಿ ಹಾಗೂ ನೂರಾರು ಜೆಡಿಎಸ್ ಕಾರ್ಯಕರ್ತರು ಹಾಜರಿದ್ದರು.

■ ರೈತ ಸಂಘದ ಕಾರ್ಯಕರ್ತರ ಮೇಲಿನ ಹಲ್ಲೆ ಪ್ರಕರಣ

ಅಡಗೂರು ಗ್ರಾಮದಲ್ಲಿ ರಸ್ತೆತಡೆ

ಹಳೇಬೀಡು : ಹಳೇಬೀಡು, ಮಾದಿಹಳ್ಳಿ ಹೋಬಳಿಗೆ ನೀರು ಹರಿಸುವ ಸಂಬಂಧ ಹೊಯ್ಸಳರ ಕಾಲದಲ್ಲಿ ನೀರು ಹರಿಸುತ್ತಿದ್ದ ರಣಘಟ್ಟ ಒಡ್ಡಿಗೆ ಮಾಜಿ ಪ್ರಧಾನ ಮಂತ್ರಿ ಎಚ್.ಡಿ. ದೇವೇಗೌಡರು ಭೇಟಿ ನೀಡಿದ ಸಂದರ್ಭದಲ್ಲಿ ಜೆಡಿಎಸ್ ಕಾರ್ಯಕರ್ತರು ರೈತ ಸಂಘದ ಸದಸ್ಯರ ಮೇಲೆ ಹಲ್ಲೆ ನಡೆಸಿ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿ ಮಾದಿಹಳ್ಳಿ ಹೋಬಳಿಯ ರೈತ ಸಂಘದ ಸದಸ್ಯರು ಸೋಮವಾರ ಅಡಗೂರು ಗ್ರಾಮದಲ್ಲಿ ರಸ್ತೆತಡೆ ಹಾಗೂ ಸಾಂಕೇತಿಕ ಬಂದ್ ನಡೆಸಿ ಪ್ರತಿಭಟನೆ ನಡೆಸಿದರು.

ನೀರಾವರಿ ಯೋಜನೆ ಅನುಷ್ಠಾನದ ಕನಸು ಕಂಡು ಮಾಜಿ ಪ್ರಧಾನ ಮಂತ್ರಿ ಆಗಮಿಸಿದ್ದಾಗ ರಣಘಟ್ಟಕ್ಕೆ ನೂರಾರು ಸಂಖ್ಯೆಯಲ್ಲಿ ರೈತರು ತೆರಳಿದ್ದರು. ಈ ಸಂದರ್ಭದಲ್ಲಿ ಅಡಗೂರು ಕ್ಷೇತ್ರದ ಜಿಲ್ಲಾ ಪಂಚಾಯಿತಿ ಸದಸ್ಯೆ ಲತಾ ಅವರ ಪತಿ ದಿಲೀಪ್ ಕುಮಾರ್, ಗಂಗೂರು ರಾಮಚಂದ್ರ, ರೈತ ಮುಖಂಡರಾದ ಅಡಗೂರು ವಿಜಯಕುಮಾರ್ ಹಾಗೂ ಕೆ.ಪಿ.ಕುಮಾರ್ ಮೇಲೆ ಹಲ್ಲೆ ನಡೆಸಲಾಗಿದೆ. ಇದರಿಂದ ಬರಗಾಲದಿಂದ ನೊಂದು ನೀರಾವರಿ ಯೋಜನೆಗಾಗಿ ಹೋರಾಟ ಮಾಡುತ್ತಿರುವ ರೈತರ ಮನಸ್ಸಿಗೆ ನೋವಾಗಿದೆ ಎಂದು

ಪ್ರತಿಭಟನಾಕಾರರು ಆರೋಪಿಸಿದರು.

ರೈತರ ಹೋರಾಟವನ್ನು ದಮನಗೊಳಿಸಲು ಜೆಡಿಎಸ್ ಕಾರ್ಯಕರ್ತರು ಹುನ್ನಾರ ನಡೆಸಿದ್ದಾರೆ. ಶಾಶ್ವತ ನೀರಾವರಿ ಯೋಜನೆಯಿಂದ ಹಳೇಬೀಡು, ಮಾದಿಹಳ್ಳಿ ಹಾಗೂ ಜಾವಗಲ್ ಹೋಬಳಿಯ ರೈತರನ್ನು ವಂಚಿತರನ್ನಾಗಿ ಮಾಡಲು ಜೆಡಿಎಸ್ ಕಾರ್ಯಕರ್ತರು ಪ್ರಯತ್ನ ನಡೆಸುತ್ತಿದ್ದಾರೆ. ಯಾರೇ ಅಡ್ಡ ಬಂದರೂ ನೀರಾವರಿ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ರೈತ ಮುಖಂಡ ಅಡಗೂರು ಆನಂದ್ ಹೇಳಿದರು.

ಜೆಡಿಎಸ್ ಕಾರ್ಯಕರ್ತರಿಂದಲೇ ಮಾಜಿ ಪ್ರಧಾನಮಂತ್ರಿ ದೇವೇಗೌಡರು ಸೇರಿದಂತೆ ಹಾಸನ ಜಿಲ್ಲೆಯಲ್ಲಿ ಜೆಡಿಎಸ್ ಜನಪ್ರತಿನಿಧಿಗಳು ಚುನಾವಣೆಯಲ್ಲಿ ಜಯಗಳಿಸಿಲ್ಲ. ಹೆಚ್ಚಿನ ಭಾಗ ರೈತರನ್ನೇ ಹೊಂದಿರುವ ಮತದಾರರಿಂದ ಜೆಡಿಎಸ್ ಜನಪ್ರತಿನಿಧಿಗಳು ಚುನಾಯಿತರಾಗಿದ್ದಾರೆ. ರೈತ ಸಂಘದ ಸದಸ್ಯರಿಂದ ತಪ್ಪಿನ ಮಾತು ಬಂದಿದ್ದರೆ ಮಾತುಕತೆ ನಡೆಸಿ ತಿಳಿವಳಿಕೆ ನೀಡಬೇಕಿತ್ತು. ರೈತರ ಮೇಲೆ ಹಲ್ಲೆ ಮಾಡಿದ್ದು ತಪ್ಪು ಎಂದು ಹಿರಿಯ ಮುಖಂಡ ಪದ್ಮಪ್ರಭು ಆರೋಪಿಸಿದರು.

ಹಳೇಬೀಡು, ಮಾದಿಹಳ್ಳಿ ಹಾಗೂ ಜಾವಗಲ್ ಹೋಬಳಿಗಳು ಬರದಿಂದ ತತ್ತರಿಸಿವೆ. ಆದರೂ ಜೆಡಿಎಸ್ ವರಿಷ್ಠ ದೇವೇಗೌಡರು ಇಲ್ಲಿನ ನೀರಾವರಿ ಯೋಜನೆಯ ಬಗ್ಗೆ ಯಾವುದೇ ಹೇಳಿಕೆ ನೀಡಿಲ್ಲ ಎಂದರು. *(-4ನೇ ಪುಟಕ್ಕೆ)*

ಕಾಡಾನೆ ಹಾವಳಿ : ಶಾಶ್ವತ ಪರಿಹಾರಕ್ಕೆ ಒತ್ತಾಯಿಸಿ ಧರಣಿ

ಆಲೂರು : ಆಲೂರು ಹಾಗೂ ಸಕಲೇಶಪುರ ತಾಲ್ಲೂಕಿನ ಮಲೆನಾಡು ಪ್ರದೇಶಗಳಲ್ಲಿನ ಕಾಡಾನೆ ಹಾವಳಿಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಆನೆಗಳ ಉಪಟಳ ವಿರೋಧಿ ಹೋರಾಟ ಸಮಿತಿ ವತಿಯಿಂದ ಶಾಸಕ ಹೆಚ್.ಕೆ.ಕುಮಾರಸ್ವಾಮಿ ನೇತೃತ್ವದಲ್ಲಿ ತಾಲ್ಲೂಕಿನ ಕೆಂಚಮ್ಮನ ಹೊಸಕೋಟೆ ಗ್ರಾಮದಲ್ಲಿ ಸೋಮವಾರ ಪಕ್ಷಾತೀತವಾಗಿ ಪ್ರತಿಭಟನೆ ನಡೆಸಲಾಯಿತು

ಸೋಮವಾರ ಬೆಳಿಗ್ಗೆಯಿಂದಲೇ ಗ್ರಾಮದಲ್ಲಿ ಅಪಾರ ಸಂಖ್ಯೆಯಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ರಸ್ತೆಯಲ್ಲಿ ಶಾಮಿಯಾನ ಹಾಕಿ ರಸ್ತೆತಡೆ ನಡೆಸಿದರು. ಸ್ಥಳಕ್ಕೆ ಅರಣ್ಯ ಸಚಿವರು ಆಗಮಿಸುವವರೆಗೂ ಯಾವುದೇ ಕಾರಣಕ್ಕೂ ಪ್ರತಿಭಟನೆ ಹಿಂಪಡೆಯುವುದಿಲ್ಲ ಎಂದು ಪಟ್ಟು ಹಿಡಿದರು. ಅರಣ್ಯ ಇಲಾಖೆಯ ಸಿಸಿಎಫ್ ಸ್ಥಳಕ್ಕೆ ಆಗಮಿಸಿ ಪ್ರತಿಭಟನಾಕಾರರ ಮನವೊಲಿಸಲು ಯತ್ನಿಸಿದರೂ ಯಾವುದೇ ಪ್ರಯೋಜನವಾಗಲಿಲ್ಲ.

ನಾಗರಿಕ ಹೋರಾಟ ಸಮಿತಿಯ ಅಧ್ಯಕ್ಷ ಕೆ.ಎಸ್.ಮಂಜೇಗೌಡ ಮಾತನಾಡಿ, ಆಲೂರು-ಸಕಲೇಶಪುರ ತಾಲ್ಲೂಕಿನ ಜನರು ಕಾಡಾನೆ ಹಾವಳಿಗೆ ಸಿಲುಕಿ ನಲುಗಿ ಹೋಗಿದ್ದಾರೆ. *(-4ನೇ ಪುಟಕ್ಕೆ)*

ಅವೈಜ್ಞಾನಿಕ ಪರಿಹಾರ : ಶಾಸಕ ಟೀಕೆ

ಕಾಡಾನೆ ಹಾಗೂ ಮಾನವನ ನಡುವೆ ಸಂಘರ್ಷ ಕಳೆದ 30 ವರ್ಷಗಳಿಂದ ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ದಿನದಿಂದ ದಿನಕ್ಕೆ ಈ ಸಮಸ್ಯೆ ಉಲ್ಬಣಗೊಳ್ಳುತ್ತಿದೆ. ಇದರಿಂದಾಗಿ ಪ್ರಾಣಹಾನಿಯಾಗುವುದರ ಜೊತೆಗೆ ಅಪಾರ ಪ್ರಮಾಣದ ಬೆಳೆ ನಷ್ಟಗೊಳ್ಳುತ್ತಿದೆ ಎಂದು ಶಾಸಕ ಹೆಚ್.ಕೆ.ಕುಮಾರಸ್ವಾಮಿ ಹೇಳಿದರು.

ಸರ್ಕಾರ ಅವೈಜ್ಞಾನಿಕ ಮಾದರಿಯಲ್ಲಿ ಬೆಳೆ ಪರಿಹಾರ ನಿಗದಿಗೊಳಿಸಿದ್ದು, ಕಳೆದ ಮೂರು ವರ್ಷಗಳಿಂದ ಪರಿಹಾರ ನೀಡದೆ ಸತಾಯಿಸುತ್ತಿದೆ. ಈ ಭಾಗದಲ್ಲಿರುವ ಕಾಡಾನೆಗಳ ಭಯದಿಂದ ಕಾರ್ಮಿಕರು ಕಾಫಿ ತೋಟಗಳಿಗೆ ಬಾರದ ಕಾರಣ ಕಾಫಿ ತೋಟ ಹಾಳಾಗುತ್ತಿದೆ. ಆದ್ದರಿಂದ ಅರಣ್ಯ ಸಚಿವರು ಸ್ಥಳಕ್ಕೆ ಆಗಮಿಸಿ ಈ ಭಾಗದ ಜನರ ಸಮಸ್ಯೆಯನ್ನು ಖುದ್ದಾಗಿ ಆಲಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಒತ್ತಾಯಿಸಿದರು.

ಸ್ವಾರ್ಥ ಕಾರಣ : ಗುರುದೇವ್ ಬೇಸರ

ಕಾಡಾನೆ ಸಮಸ್ಯೆ ಉಲ್ಬಣಗೊಳ್ಳಲು ಕೆಲವು ರಾಜಕಾರಣಿಗಳು ಹಾಗೂ ಅಧಿಕಾರಿಗಳ ಸ್ವಾರ್ಥವೇ ಕಾರಣ ಎಂದು ವಿಧಾನ ಪರಿಷತ್ ಸದಸ್ಯ ಬಿ.ಆರ್.ಗುರುದೇವ್ ತಿಳಿಸಿದರು.

ಆನೆಗಳಿಗೆ ಬೇಕಾದ ಆಹಾರ ಬೆಳೆಯುವ ಗಿಡಮರಗಳ ಬದಲಿಗೆ ರಕ್ಷಿತಾರಣ್ಯ ಪ್ರದೇಶದಲ್ಲಿ ಅಪಾರ ಸಂಖೆಯಲ್ಲಿ ತೇಗದ ಮರಗಳನ್ನು ಬೆಳೆಸಲಾಗಿದೆ. ಇದರಿಂದಾಗಿ ಕಾಡಾನೆಗಳು ನಾಡಿನತ್ತ ಮುಖ ಮಾಡಿವೆ. ಸರ್ಕಾರ ನೀಡುತ್ತಿರುವ ಬೆಳೆ ಪರಿಹಾರ ಮೊತ್ತ ಅವೈಜ್ಞಾನಿಕವಾಗಿದೆ ಎಂದರು.

ಕಾರಿಡಾರ್ ನಿರ್ಮಿಸುವಷ್ಟು ಹಣ ಯಾವ ಸರ್ಕಾರದಲ್ಲೂ ಇಲ್ಲ. ಇದರ ಬದಲು ರಕ್ಷಿತಾರಣ್ಯ ಪ್ರದೇಶದ ಗಡಿಗಳಲ್ಲಿ ದೊಡ್ಡದಾದ ಕಂದಕಗಳನ್ನು ನಿರ್ಮಿಸಿದರೆ ಸೂಕ್ತ ಎಂದು ಅವರು ಸಲಹೆ ನೀಡಿದರು.

ಅ.12ರಿಂದ ಹಾಸನಾಂಬೆ ದರ್ಶನ

ಹಾಸನ : ನಗರದ ಅಧಿದೇವತೆ ಹಾಸನಾಂಬೆ ದರ್ಶನ ಮಹೋತ್ಸವ ಅಕ್ಟೋಬರ್ 12ರಿಂದ ಪ್ರಾರಂಭವಾಗಲಿದ್ದು, ಜಿಲ್ಲಾಡಳಿತ ಸಕಲ ಸಿದ್ಧತೆಗಳನ್ನು ಕೈಗೊಳ್ಳುತ್ತಿದೆ. ಇದರ ಯಶಸ್ಸಿಗೆ ಎಲ್ಲರೂ ಸಹಕಾರ ನೀಡಬೇಕು ಎಂದು ಉಪವಿಭಾಗಾಧಿಕಾರಿ ಡಾ:ಹೆಚ್.ಎಲ್. ನಾಗರಾಜ್ ತಿಳಿಸಿದ್ದಾರೆ.

ಹಾಸನಾಂಬೆ ದೇವಾಲಯದ ಬಳಿ ಸೋಮವಾರ ಸಿದ್ಧತೆ ಪರಿಶೀಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಕ್ಟೋಬರ್ 12 ರಿಂದ 21 ರವರೆಗೆ ಹಾಸನಾಂಬ ದೇವಿ ಬಾಗಿಲು ತೆರೆದಿರುತ್ತದೆ. ಆದರೆ ಬಾಗಿಲು ತೆರೆಯುವ ಅಕ್ಟೋಬರ್ 12ರಿಂದ ಹಾಗೂ ಬಾಗಿಲು ಮುಚ್ಚುವ ದಿನವಾದ ಅಕ್ಟೋಬರ್ 21ರಂದು ಸಾರ್ವಜನಿಕ ದರ್ಶನಕ್ಕೆ ಅವಕಾಶವಿರುವುದಿಲ್ಲ ಎಂದು ಹೇಳಿದರು.

ಈ ಬಾರಿ ಹೆಚ್ಚಿನ ಪಾಸ್‌ಗಳ ವಿತರಣೆ ಇರುವುದಿಲ್ಲ. ಪೂಜಾ ಅವಧಿಯನ್ನು ಕಡಿಮೆಗೊಳಿಸಲಾಗಿದ್ದು, ಅತಿ ಗಣ್ಯರ ಹಾಸನಾಂಬ ದರ್ಶನದ ವೇಳೆ ಹೆಚ್ಚಿನ ಕಾಲ ವ್ಯಯವಾಗದಂತೆ ವ್ಯವಸ್ಥೆ ಮಾಡಲಾಗಿದೆ. ಅತಿ ಗಣ್ಯರು, ಜನ ಪ್ರತಿನಿಧಿಗಳು, ಭಕ್ತಾದಿಗಳು ಸಹಕರಿಸಬೇಕು ಎಂದು ಉಪವಿಭಾಗಾಧಿಕಾರಿ ಮನವಿ ಮಾಡಿದರು.

ಈ ಬಾರಿ ಭಕ್ತಾದಿಗಳಿಗೆ ಪ್ರಸಾದವನ್ನು ಹಾಸನಾಂಬ ದೇವಾಲಯದಿಂದ 200 ಮೀಟರ್ ದೂರದಲ್ಲಿರುವ ಚನ್ನಕೇಶವಸ್ವಾಮಿ ದೇವಾಲಯದಲ್ಲಿ ವಿತರಿಸಲಾಗುವುದು. ತುರ್ತು ದರ್ಶನ ಬಯಸುವವರು ವಿಶೇಷ ದರ್ಶನದ ಪಾಸ್ ಪಡೆದು ದೇವರ ಆಶೀರ್ವಾದ ಪಡೆಯಬಹುದು ಎಂದು ಅವರು ಹೇಳಿದರು.

> “ಲಾಡು ಪ್ರಸಾದ ವಿತರಣೆಗೆ ಪ್ರತ್ಯೇಕ ಕೌಂಟರ್ ತೆರೆಯಲಾಗಿದೆ. ಗಲಾಟೆ ಮತ್ತಿತರೆ ಚಟುವಟಿಕೆ ನಿರ್ಬಂಧಕ್ಕೆ ಕಠಿಣ ಕ್ರಮ ಕೈಗೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ 12 ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ.
> -ಡಾ.ಹೆಚ್.ಎಲ್.ನಾಗರಾಜ್,
> ಉಪವಿಭಾಗಾಧಿಕಾರಿ, ಹಾಸನ.

ತಹಸೀಲ್ದಾರ್ ಶಿವಶಂಕರ್, ಮುಜರಾಯಿ ತಹಸೀಲ್ದಾರ್ ವಿದ್ಯುಲತ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕ ಶ್ರೀಕಂಠಮೂರ್ತಿ ಮತ್ತಿತರರು ಈ ಸಂದರ್ಭದಲ್ಲಿ ಹಾಜರಿದ್ದರು.

ಹಾಸನಾಂಬ ದೇವಿಯನ್ನು ಭಕ್ತರು ವರ್ಷದ ಎಲ್ಲಾ ಕಾಲದಲ್ಲೂ ದರ್ಶನ ಮಾಡಲು ಸಾಧ್ಯವಿರುವುದಿಲ್ಲ. ವರ್ಷಕ್ಕೊಂದು ಬಾರಿ ಆಶ್ವಯುಜ ಮಾಸದ ಹುಣ್ಣಿಮೆಯ ನಂತರ ಬರುವ ಗುರುವಾರದಂದು ಬಾಗಿಲು ತೆರೆದರೆ ಅನಂತರ ಬಲಿಪಾಡ್ಯಮಿ ಮಾರನೇ ದಿನ ಬಾಗಿಲು ಮುಚ್ಚುವುದು. ಪುನಃ ವರ್ಷದ ಕಾಲ ದೇವಿಯ ದರ್ಶನ ದೊರೆಯುವುದಿಲ್ಲ. ಹಾಸನಾಂಬ ದೇವಿಯ ವಿಶೇಷವೆಂದರೆ ದೇವಾಲಯದ ಬಾಗಿಲು ಮುಚ್ಚುವ ದಿವಸ ಹಚ್ಚಿದ ದೀಪವು ನಂದದೇ ಹಾಗೂ ಅಲಂಕರಿಸಿದ ಪುಷ್ಪಗಳು ಬಾಡದೇ ಹಾಗೆ ಇರುತ್ತವೆ.

- ■ ಜಿಲ್ಲಾಡಳಿತ ಸಕಲ ಸಿದ್ಧತೆ
- ■ ಅ.21ರವರೆಗೆ ಜಾತ್ರಾ ಮಹೋತ್ಸವ
- ■ ಬಾಗಿಲು ಮುಚ್ಚುವ ದಿನ ದರ್ಶನಕ್ಕೆ ಅವಕಾಶ ಇಲ್ಲ
- ■ ಈ ಬಾರಿ ಹೆಚ್ಚಿನ ಪಾಸ್‌ಗಳ ವಿತರಣೆ ಇಲ್ಲ
- ■ ದರ್ಶನದ ವೇಳೆ ಹೆಚ್ಚಿನ ಕಾಲ ವ್ಯಯವಾಗದಂತೆ ವ್ಯವಸ್ಥೆ
- ■ ಚನ್ನಕೇಶವ ದೇವಾಲಯದಲ್ಲಿ ಪ್ರಸಾದ ವಿತರಣೆ
- ■ ತುರ್ತು ದರ್ಶನ ಬಯಸುವವರಿಗೆ ವಿಶೇಷ ಪಾಸ್